ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಆರನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 20ನೇ ಫೆಬ್ರವರಿ, 2020

(ಸಮಯ: ಬೆಳಿಗ್ಗೆ 10.30 ಗಂಟೆಗೆ)

----

1. ಸದಸ್ಯರಿಂದ ಪ್ರಮಾಣ ವಚನ / ಪ್ರತಿಜ್ಞಾ ವಚನ ಸ್ವೀಕಾರ

2. ವರದಿಗಳನ್ನೊಪ್ಪಿಸುವುದು

ಶ್ರೀ ಅರಗ ಜ್ಞಾನೇಂದ್ರ (ಅಧ್ಯಕ್ಷರು, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿ) ಅವರು 2019-20ನೇ ಸಾಲಿನ ಕರ್ನಾಟಕ ವಿಧಾನಮಂಡಲದ ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 29ನೇ (ಅನುಪಾಲನಾ) ವರದಿ ಹಾಗೂ 30ನೇ ವರದಿ (ಮಧ್ಯಂತರ ವಿಶೇಷ ವರದಿ)ಗಳನ್ನೊಪ್ಪಿಸುವುದು.

3. ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದ ವಂದನಾರ್ಪಣಾ ಪ್ರಸ್ತಾವ

"2020ರ ಫೆಬ್ರವರಿ 17 ರಂದು ವಿಧಾನಮಂಡಲದ ಉಭಯ ಸದನಗಳ ಸದಸ್ಯರನ್ನುದ್ದೇಶಿಸಿ ದಯಪಾಲಿಸಿದ ಭಾಷಣಕ್ಕಾಗಿ ಈ ಅಧಿವೇಶನದಲ್ಲಿ ಸೇರಿರುವ ವಿಧಾನಸಭೆಯ ಸದಸ್ಯರಾದ ನಾವು ಮಾನ್ಯ ರಾಜ್ಯಪಾಲರಿಗೆ ಕೃತಜ್ಞತಾಪೂರ್ವಕವಾದ ವಂದನೆಗಳನ್ನು ಸಮರ್ಪಿಸಲು ಅಪ್ಪಣೆ ಕೋರುತ್ತೇವೆ" ಎಂದು ದಿನಾಂಕ 18ನೇ ಫೆಬ್ರವರಿ 2020 ರಂದು ಶ್ರೀ ಎ.ಎಸ್. ಪಾಟೀಲ್ (ನಡಹಳ್ಳಿ) ರವರು ಸೂಚಿಸಿ, ಶ್ರೀ ಹೆಚ್. ಹಾಲಪ್ಪ ಹರತಾಳ್ ರವರು ಅನುಮೋದಿಸಿರುವ ಪ್ರಸ್ತಾವದ ಮೇಲೆ ಮುಂದುವರೆದ ಚರ್ಚೆ (ಎರಡನೇ ದಿನ) ಹಾಗೂ ಸರ್ಕಾರದ ಉತ್ತರ.

4. ಶಾಸನ ರಚನೆ

ವಿಧೇಯಕಗಳನ್ನು ಮಂಡಿಸುವುದು

1. **ಶ್ರೀ ಅರಬೈಲ್ ಹೆಬ್ಬಾರ್ ಶಿವರಾಮ್ (ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು) ಅವರು:–**

   ಅ) 2020ನೇ ಸಾಲಿನ ಕೈಗಾರಿಕಾ ವಿವಾದಗಳ (ಕರ್ನಾಟಕ ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

2. **ಶ್ರೀ ಅರಬೈಲ್ ಹೆಬ್ಬಾರ್ ಶಿವರಾಮ್ (ಮಾನ್ಯ ಕಾರ್ಮಿಕ ಮತ್ತು ಸಕ್ಕರೆ ಸಚಿವರು) ಅವರು:–**

   ಅ) 2020ನೇ ಸಾಲಿನ ಕರ್ನಾಟಕ ವಾಣಿಜ್ಯ ಮತ್ತು ವಾಣಿಜ್ಯ ಕಾರ್ಯಸಂಸ್ಥೆಗಳ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ಕೋರುವುದು;

   ಆ) ಹಾಗೂ ವಿಧೇಯಕವನ್ನು ಮಂಡಿಸುವುದು.

5. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ, ಕೆ. ಶ್ರೀನಿವಾಸಗೌಡ, ಕೆ.ಎಂ. ಶಿವಲಿಂಗೇಗೌಡ, ಎ.ಟಿ. ರಾಮಸ್ವಾಮಿ, ಸಿ.ಎನ್. ಬಾಲಕೃಷ್ಣ ಹಾಗೂ ಇತರರು –** ರಾಜ್ಯದ ಸರ್ವಾಂಗೀಣ ಅಭಿವೃದ್ಧಿಗಾಗಿ ಅಂಗೀಕಾರಗೊಂಡಿದ್ದ ವಿವಿಧ ಇಲಾಖೆಗಳ ಕಾಮಗಾರಿಗಳನ್ನು ಆರ್ಥಿಕ ಬಿಕ್ಕಟ್ಟಿನಿಂದಾಗಿ ಸ್ಥಗಿತಗೊಳಿಸಿರುವ ಬಗ್ಗೆ

   ಹಾಗೂ

   ಲೋಕೋಪಯೋಗಿ ಇಲಾಖೆಯ ಕಾಮಗಾರಿಗಳಿಗಾಗಿ 2018–19ನೇ ಸಾಲಿನಲ್ಲಿ ಮಂಜೂರಾಗಿದ್ದ ಮೊತ್ತವನ್ನು ತಡೆಹಿಡಿದಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಗಳ ಮೇಲೆ ಚರ್ಚೆ.

2) **ಶ್ರೀಯುತರುಗಳಾದ ಬಂಡೆಪ್ಪ ಖಾಶೆಂಪೂರ, ಪ್ರಿಯಾಂಕ ಖರ್ಗೆ ಹಾಗೂ ಎಂ.ವೈ. ಪಾಟೀಲ ಇವರುಗಳು** – ತೊಗರಿಯನ್ನು ಬೆಂಬಲ ಬೆಲೆಯಲ್ಲಿ ರೈತರಿಂದ ಖರೀದಿ ಮಾಡುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)
